ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

5

ಇಲಾಖೆ / ವಿಷಯ : DEPARTMENT / SUBJECT: ಗೃಹ - (ಬೆಂಗಳೂರು ಗಲಭೆ)

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ          ದಿನಾಂಕ : DATE 15/10/2020

# ಡಿ.ಜೆ.ಹಳ್ಳಿ ಗಲಭೆ: ಕಾಂಗ್ರೆಸ್ ಶಾಸಕರ ವಿಚಾರಣೆ

## ಪರಿಸ್ಥಿತಿ ಶಾಂತಗೊಳಿಸಲು ಯತ್ನಿಸಿದ್ದೇವೆ। ಗಲಭೆ ವೇಳೆ ಸ್ಥಳಕ್ಕೆ ಭೇಟಿ ನೀಡಿದ್ದ ಜಮೀರ್, ರಿಜ್ವಾನ್ ಹೇಳಿಕೆ

• **ಕನ್ನಡಪ್ರಭ ವಾರ್ತೆ** ಬೆಂಗಳೂರು

15/10

ಡಿ.ಜೆ.ಹಳ್ಳಿ-ಕೆ.ಜಿ.ಹಳ್ಳಿ ಗಲಭೆ ಪ್ರಕರಣ ಸಂಬಂಧ ಕಾಂಗ್ರೆಸ್ ಶಾಸಕರಾದ ಚಾಮರಾಜಪೇಟೆ ಕ್ಷೇತ್ರದ ಜಮೀರ್ ಅಹಮ್ಮದ್ ಖಾನ್ ಹಾಗೂ ಶಿವಾಜಿನಗರದ ರಿಜ್ವಾನ್ ಅರ್ಷದ್ ಅವರನ್ನು ರಾಷ್ಟ್ರೀಯ ತನಿಖಾ ದಳದ (ಎನ್‌ಐಎ) ಅಧಿಕಾರಿಗಳು ವಿಚಾರಣೆಗೊಳಪಡಿಸಿ ಹೇಳಿಕೆ ದಾಖಲಿಸಿಕೊಂಡಿದ್ದಾರೆ.



ಗಲಭೆನಡೆದವೇಳೆಶಾಸಕದ್ವಯರು ಸ್ಥಳದಲ್ಲಿ ಹಾಜರಿದ್ದರು. ಈ ಹಿನ್ನೆಲೆಯಲ್ಲಿ ಶಾಸಕರನ್ನು ಕಚೇರಿಗೆ ಕರೆಸಿಕೊಂಡು ಅಧಿಕಾರಿಗಳು ಪ್ರಶ್ನಿಸಿ ಮಾಹಿತಿ ಪಡೆದಿದ್ದಾರೆ. ನಮಗೆ ಗಲಭೆ ಪೂರ್ವನಿಯೋಜಿತವೇ ಎಂಬುದು ಗೊತ್ತಿಲ್ಲ. ಅಂದು ರಾತ್ರಿ ನಮಗೆ ಕರೆ ಮಾಡಿ ಗಲಭೆ ನಿಯಂತ್ರಣಕ್ಕೆ ಸಹಕರಿಸುವಂತೆ ಗೃಹ ಸಚಿವ ಬಸವರಾಜ ಬೊಮ್ಮಾಯಿ ಹಾಗೂ ಹಿರಿಯ ಪೊಲೀಸ್ ಅಧಿಕಾರಿಗಳು ಮಾಡಿದ ಮನವಿ ಮೇರೆಗೆ ಗಲಭೆಪೀಡಿತ ಪ್ರದೇಶಕ್ಕೆ ತೆರಳಿ ಪರಿಸ್ಥಿತಿ ಶಾಂತಗೊಳಿಸಲು ಯತ್ನಿಸಿದ್ದೆವು ಎಂದು ಶಾಸಕರು ಸ್ಪಷ್ಟಪಡಿಸಿದ್ದಾರೆ ಎನ್ನಲಾಗಿದೆ.

ಶಾಸಕ ಹೇಳಿಕೆಗೆ ಸಮ್ಮತಿಸಿದ ಅಧಿಕಾರಿಗಳು, ನೀವು ಅಗತ್ಯವಿದ್ದರೆ ವಿಚಾರಣೆಗೆ ಬರಬೇಕಿದೆ. ಅಲ್ಲದೆ, ಪ್ರಕರಣದ ಕುರಿತು ನಿಮಗೆ ಮಾಹಿತಿ ಇದ್ದರೆ ಹಂಚಿಕೊಳ್ಳುವಂತೆ ಸಹ ಸೂಚಿಸಿ ಕಳುಹಿಸಿದ್ದಾರೆ ಎಂದು ತಿಳಿದು ಬಂದಿದೆ.

ಡಿ.ಜೆ.ಹಳ್ಳಿ-ಕೆ.ಜಿ.ಹಳ್ಳಿ ಗಲಭೆ ಪ್ರಕರಣದ ಪೊಲೀಸ್ ಗೋಲಿಬಾರ್ ಬಗ್ಗೆ ತನಿಖೆ ನಡೆಸುತ್ತಿರುವ ಎನ್‌ಐಎ ಅಧಿಕಾರಿಗಳು, ಅಂದು ಗಲಭೆ ವೇಳೆ ಹಾಜರಿದ್ದ ಸಚಿವರು, ಶಾಸಕರು, ಪೊಲೀಸ್ ಅಧಿಕಾರಿಗಳು ಸೇರಿದಂತೆ ನೂರಾರು ಜನರ ವಿಚಾರಣೆ ನಡೆಸಿ ಹೇಳಿಕೆ ಪಡೆಯಲು ಮುಂದಾಗಿದ್ದಾರೆ. ಅಂತೆಯೇ ಗಲಭೆ ನಡೆದ ದಿನ ಸ್ಥಳಕ್ಕೆ ತೆರಳಿ ಉದ್ರಿಕ್ತರ ಗುಂಪುಗಳನ್ನು ಸಮಾಧಾನಪಡಿಸಲು ಯತ್ನಿಸಿದ್ದ ಕಾಂಗ್ರೆಸ್ಸಿನ ಹಿರಿಯ ಶಾಸಕ ಜಮೀರ್ ಅಹಮ್ಮದ್ ಖಾನ್ ಹಾಗೂ ಶಿವಾಜಿನಗರ ರಿಜ್ವಾನ್ ಅರ್ಷದ್ ಅವರಿಗೆ ನೋಟಿಸ್ ನೀಡಿತ್ತು. 3 ದಿನಗಳ ಹಿಂದೆ ಶಾಸಕರಿಗೆ ಅಧಿಕಾರಿಗಳು ಕರೆ ಮಾಡಿದ್ದರು.

### ನಮ್ಮ ಕೈಮೀರಿದ ಘಟನೆ: ಶಾಸಕರ ಹೇಳಿಕೆ

'ಆ.11ರಂದು ಮಂಗಳವಾರ ರಾತ್ರಿ ನಾನು ಮನೆಯಲ್ಲಿದ್ದೆ. ಪೊಲೀಸ್ ಅಧಿಕಾರಿಗಳಿಂದ ನನಗೆ ಕರೆ ಬಂದಿತು. ಪರಿಸ್ಥಿತಿ ನಿಯಂತ್ರಿಸಲು ಕೂಡಲೇ ಸ್ಥಳಕ್ಕಾಗಮಿಸುವಂತೆ ಅಧಿಕಾರಿಗಳು ಕೋರಿದರು. ಬಳಿಕ ಗೃಹ ಸಚಿವ ಬಸವರಾಜ್ ಬೊಮ್ಮಾಯಿ ಸಹ ಮಾತನಾಡಿದ್ದರು. ಅದೇ ಹೊತ್ತಿಗೆ ಅಖಂಡ ಶ್ರೀನಿವಾಸ್ ಮೂರ್ತಿ ಕೂಡಾ ನನ್ನನ್ನು ಸಂಪರ್ಕಿಸಿ ಘಟನೆ ಬಗ್ಗೆ ವಿವರಿಸಿ ಸಹಾಯ ಕೋರಿದ್ದರು ಎಂದು ಜಮೀರ್ ಹೇಳಿದ್ದಾರೆಂದು ತಿಳಿದುಬಂದಿದೆ. ಪ್ರತಿಭಟನಾಕಾರರನ್ನು ಸಮಾಧಾನಪಡಿಸಲು ಯತ್ನಿಸಿದೆ. ಆದರೆ ನಮ್ಮ ಮಾತಿಗೆ ಉದ್ರಿಕ್ತರು ಬೆಲೆ ಕೊಡದೆ ಗಲಾಟೆ ಮುಂದುವರೆಸಿದ್ದರು ಎಂದು ಹೇಳಿದ್ದಾರೆ.